ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 15–10–2020

# ಪತ್ರಿಕಾ ಪ್ರಕಟಣೆ

## ಮತದಾನದ ದಿನದಂದು ಕಾರ್ಮಿಕರಿಗೆ ವೇತನ ಸಹಿತ ರಜೆ ಘೋಷಣೆ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ): ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ ಶಿರಾ–136, ರಾಜರಾಜೇಶ್ವರಿ ನಗರ–154 ಈ ವಿಧಾನಸಭೆ ಕ್ಷೇತ್ರಗಳಿಗೆ ನವೆಂಬರ್ 3 ರಂದು ಉಪ ಚುನಾವಣೆ ಘೋಷಿಸಿದ್ದು, ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೊಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ವೇತನ ಸಹಿತ ರಜೆ ಘೋಷಿಸಿದೆ.

ಮತ ಚಲಾಯಿಸಲು ಎಲ್ಲಾ ಸಂಸ್ಥೆಗಳು–ನಿಯೋಜಕರು ಅನುವು ಮಾಡಿಕೊಡಬೇಕು. ಚುನಾವಣೆಯು ನಡೆಯುವ ಕ್ಷೇತ್ರಗಳಲ್ಲಿ ಮತ ಚಲಾಯಿಸಲು ಅರ್ಹ ಕಾರ್ಮಿಕರು ಮತದಾನ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಇತರೆ ಸಂಸ್ಥೆಗಳ ಮಾಲೀಕರು ವೇತನ ಸಹಿತ ರಜೆ ನೀಡುವಂತೆ ಆದೇಶಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ–ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಕಾರ್ಮಿಕ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾನದ ದಿನದಂದು ರಾಜ್ಯ ಸರ್ಕಾರಿ ಕಚೇರಿಗಳಿಗೆ ರಜೆ ಘೋಷಣೆ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ): ಭಾರತ ಚುನಾವಣಾ ಆಯೋಗವು ಕರ್ನಾಟಕ ರಾಜ್ಯದಲ್ಲಿ ತೆರವಾಗಿರುವ ಶಿರಾ–136, ರಾಜರಾಜೇಶ್ವರಿ ನಗರ–154 ಈ ವಿಧಾನಸಭೆ ಕ್ಷೇತ್ರಗಳಿಗೆ ನವೆಂಬರ್ 3 ರಂದು ಉಪ ಚುನಾವಣೆ ಘೋಷಿಸಿದ್ದು, ಉಪ ಚುನಾವಣೆ ನಡೆಯುತ್ತಿರುವ ಮತ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ ) ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಒಳಗೊಂಡಂತೆ ಸಾವ್ರರ್ತಿಕ ರಜೆಯನ್ನು ಘೋಷಿಸಿದೆ.

ಉಪಚುನಾವಣೆ ನಡೆಯುತ್ತಿರುವ ಕ್ಷೇತ್ರಗಳ ವ್ಯಾಪ್ತಿಯ ಹೊರಗಡೆ ಕೆಲಸ ನಿರ್ವಹಿಸುತ್ತಿದ್ದು ಮತ್ತು ಉಪಚುನಾವಣೆ ನಡೆಯುತ್ತಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತ ಮತದಾರರಾಗಿರುವವರಿಗೆ ಹಾಗೂ ಎಲ್ಲಾ ವ್ಯಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ನವೆಂಬರ್ 03 ರಂದು ವೇತನ ಸಹಿತ ರಜೆಯನ್ನು ಘೋಷಿಸಿ ಸರ್ಕಾರ ಆದೇಶಿಸಿದೆ.

## ಗ್ರೂಪ್ 'ಎ' ವೃಂದದ ಹುದ್ದೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ 'ಎ' ವೃಂದದ ಬಿ.ಎಸ್ಸಿ ಫಾರೆಸ್ಟ್ರಿ ವಿಷಯದಲ್ಲಿ ಪದವಿ ಹೊಂದಿದವರಿಂದ 08 ಹುದ್ದೆಗಳು ಹಾಗೂ ಬಿ.ಎಸ್ಸಿ. ಫಾರೆಸ್ಟ್ರಿ ವಿಷಯವಲ್ಲದ ವಿಜ್ಞಾನ/ಇಂಜಿನಿಯರಿಂಗ್ ವಿಷಯದಲ್ಲಿ ಪದವಿ ಹೊಂದಿದವರಿಂದ 08 ಹುದ್ದೆಗಳು. ಒಟ್ಟು 16 ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅಕ್ಟೋಬರ್ 20 ರಿಂದ ನವೆಂಬರ್ 20 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದು. ಶುಲ್ಕ ಪಾವತಿಸಲು ನವೆಂಬರ್ 21 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ **http://kpsc.kar.nic.in/Notification** ಅನ್ನು ನೋಡಬಹುದು.

## ಸ್ನಾತಕೋತ್ತರ ಪ್ರವೇಶಾತಿಗೆ ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ):

2020-21ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ವ್ಯಾಪ್ತಿಯಲ್ಲಿನ ಹಾಗೂ ಅನ್ಯ ರಾಜ್ಯಗಳ ವಿಶ್ವವಿದ್ಯಾನಿಲಯಗಳಿಂದ ಸ್ನಾತಕ ಪದವಿಯಲ್ಲಿ ತೇರ್ಗಡೆ ಹೊಂದಿದ ಅರ್ಹ ಅಭ್ಯರ್ಥಿಗಳಿಂದ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ 20.10.2020ರವರೆಗೆ ವಿಸ್ತರಿಸಲಾಗಿದ್ದು, ಕೌನ್ಸೆಲಿಂಗ್ ದಿನಾಂಕಗಳನ್ನು ಮುಂದೂಡಲಾಗಿದೆ.

ಅರ್ಜಿ ಸಲ್ಲಿಸಿದ ಎಲ್ಲಾ ಅಭ್ಯರ್ಥಿಗಳು ತಪ್ಪದೇ ಕೊನೆಯ ದಿನಾಂಕದೊಳಗೆ ಮುದ್ರಿತ ಅರ್ಜಿ ನಮೂನೆಯೊಂದಿಗೆ ನಿಗಧಿತ ದಾಖಲೆಗಳನ್ನು ಸಂಬಂಧಿಸಿದ ವಿಭಾಗಗಳಿಗೆ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.tumkuruniversity.ac.in ನಿಂದ ಪಡೆಯಬಹುದಾಗಿದೆ.

# ಅಬಕಾರಿ ಇಲಾಖೆಯಿಂದ ಸಹಾಯವಾಣಿ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ) :**

ಸಾರ್ವಜನಿಕರು ಅಬಕಾರಿ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಟೋಲ್ ಫ್ರೀ ನಂಬರ್ 1800 4252 550ಗೆ ಸಂಪರ್ಕಿಸಲು ಅಬಕಾರಿ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಟ್ರೋಲ್ ರೂಂ ಸ್ಥಾಪನೆ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ) :**

ಬೆಂಗಳೂರು ನಗರ ಜಿಲ್ಲೆ(ಬಿಯುಡಿ-6) ವ್ಯಾಪ್ತಿಯ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರಕ್ಕೆ ಪದ್ಮನಾಭನಗರ, ಅಬಕಾರಿ ವಲಯ ವ್ಯಾಪ್ತಿಯನ್ನು ಹೊಂದಿದ್ದು ಈ ಉಪಚುನಾವಣೆ ಸಂಬಂಧ ಅಕ್ರಮ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರಿಂದ ಹಾಗೂ ಇತರೆ ಬಾಹ್ಯ ಮೂಲಗಳಿಂದ ಬರುವ ದೂರುಗಳನ್ನು ಸ್ವೀಕರಿಸಿ, ಅಗತ್ಯ ಕ್ರಮ ಜರುಗಿಸುವ ಸಲುವಾಗಿ ಅಬಕಾರಿ ಉಪ ಆಯುಕ್ತರು, ಬೆಂಗಳೂರು ನಗರ ಜಿಲ್ಲೆ(ಪಶ್ಚಿಮ) ಕಛೇರಿಯಲ್ಲಿ ಕಂಟ್ರೋಲ್ ರೂಂನ್ನು ಸ್ಥಾಪಿಸಲಾಗಿರುತ್ತದೆ. ಈ ಕಂಟ್ರೋಲ್ ರೂಂನ ದೂರವಾಣಿ ಸಂಖ್ಯೆ 080-26751345 ಆಗಿದ್ದು ಮೇಲ್ಕಂಡ ಅಬಕಾರಿ ವಲಯ ವ್ಯಾಪ್ತಿಗೆ ಚುನಾವಣಾ ಸಂಬಂಧ ಅಬಕಾರಿ ಅಕ್ರಮ ಚಟುವಟಿಕೆಗಳ ಬಗ್ಗೆ ದೂರು ಸಲ್ಲಿಸಲು ದಿನದ 24 ಗಂಟೆ ಸಹ ಅವಕಾಶವಿರುತ್ತದೆ. ಸಾರ್ವಜನಿಕರು ಸದರಿ ಸ್ಥಿರ ದೂರವಾಣಿಗೆ ಕರೆ ಮಾಡಿ ದೂರನ್ನು ದಾಖಲಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ) :**

ಕಂದಾಯ ಸಚಿವ ಆರ್. ಅಶೋಕ್ ಅವರು ಅಕ್ಟೋಬರ್ 16 ರಂದು ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಕ್ಟೋಬರ್ 16 ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಜಾನಪದ ವಿವಿಯ ಸ್ನಾತಕೋತ್ತರ ಪದವಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಗೊಟಗೋಡಿ/ಶಿಗ್ಗಾಂವಿ. ಕರ್ನಾಟಕ ಜಾನಪದ ವಿಶ್ವವಿದ್ಯಾಲಯವು 2020–21 ನೇ ಶೈಕ್ಷಣಿಕ ಸಾಲಿನಲ್ಲಿ ಕೇಂದ್ರಸ್ಥಾನದ ಹಾಗೂ ಪ್ರಾದೇಶಿಕ ಜಾನಪದ ಅಧ್ಯಯನ ಕೇಂದ್ರಗಳಲ್ಲಿನ ಸ್ನಾತಕೋತ್ತರ ಪದವಿ/ ಸ್ನಾತಕೋತ್ತರ ಡಿಪ್ಲೊಮಾ/ ಸರ್ಟಿಫಿಕೇಟ್ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

**ಎಂ.ಎ ಕೋರ್ಸ್:** ಎಂ.ಎ ಕೋರ್ಸಗಳಾದ ಜಾನಪದ ವಿಜ್ಞಾನ, ಜನಪದ ಸಾಹಿತ್ಯ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಜನಪದ ಕಲೆ, ಕನ್ನಡ– ಜಾನಪದ, ಪ್ರವಾಸೋದ್ಯಮ, ಬುಡಕಟ್ಟು ಅಧ್ಯಯನ, ಗ್ರಾಮೀಣ– ಬುಡಕಟ್ಟು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಮಹಿಳಾ ಅಧ್ಯಯನ, ಇಂಗ್ಲಿಷ್ (ಜಾನಪದ & ಅನುವಾದ ಅನುಲಕ್ಷಿಸಿ) ಅರ್ಥಶಾಸ್ತ್ರ(ಗ್ರಾಮೀಣ), ಸಮಾಜಶಾಸ್ತ್ರ(ಗ್ರಾಮೀಣ) ಎಂ.ಬಿ.ಎ ಗ್ರಾಮೀಣ ಮತ್ತು ಬುಡಕಟ್ಟು ನಿರ್ವಹಣೆ, ಪ್ರವಾಸೋದ್ಯಮ & ಪ್ರವಾಸೋದ್ಯಮ ನಿರ್ವಹಣೆ, ಎಂ.ಎಸ್ಸಿ ಪಾರಂಪರಿಕ ವಿಜ್ಞಾನ ಮತ್ತು ತಂತ್ರಜ್ಞಾನ, ಎಂ.ಪಿ.ಎ ಪ್ರದರ್ಶನ ಕಲೆ, ಎಂ.ವಿ.ಎ ದೃಶ್ಯ ಕಲೆ, ಎಂ.ಎಸ್.ಡಬ್ಲ್ಯೂ ಸಮಾಜ ಕಾರ್ಯ (ಜನಪದ & ಬುಡಕಟ್ಟು ಅಭಿವೃದ್ಧಿ ಅನುಲಕ್ಷಿಸಿ) ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಯುಜಿಸಿ ಅಂಗೀಕೃತ ಯಾವುದೇ ವಿಶ್ವವಿದ್ಯಾಲಯದ ಪದವಿಯಲ್ಲಿ ಉತ್ತೀರ್ಣರಾಗಿರುವ ಹಾಗೂ ಪರೀಕ್ಷೆಗೆ ಹಾಜರಾಗಿ ಫಲಿತಾಂಶ ನಿರೀಕ್ಷಿಸುತ್ತಿರುವ ವಿದ್ಯಾರ್ಥಿಗಳು ಸಹ ಅರ್ಜಿಗಳನ್ನು ಸಲ್ಲಿಸಬಹುದು. ಆದರೆ, ಫಲಿತಾಂಶ ಪ್ರಕಟಣೆಯ ನಂತರ ಅಂಕಪಟ್ಟಿಗಳನ್ನು ಕೂಡಲೇ ಇಂಟರ್‌ನೆಟ್ ಮೂಲಕ ಪಡೆದು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ಸರ್ಟಿಫಿಕೇಟ್/ ಡಿಪ್ಲೊಮಾ ಕೋರ್ಸ್:** ಸಮರ ಕಲೆ, ಜನಪದ ಗೀತ ಸಂಪ್ರದಾಯ, ಕಸೂತಿ ಕಲೆ, ಜನಪದ ನೃತ್ಯ, ದೊಡ್ಡಾಟ, ಪ್ರವಾಸೋದ್ಯಮ, ತೊಗಲು ಗೊಂಬೆಯಾಟ, ಬಿದರಿ ಕಲೆ, ಬೀಸು ಕಂಸಾಳೆ ಮತ್ತು ಡೊಳ್ಳು ಕುಣಿತ ಸೇರಿದಂತೆ ಸ್ನಾತಕೋತ್ತರ ಡಿಪ್ಲೊಮಾ ಕೋರ್ಸ್‌ಗಳಾದ ಜನಪದ ಮಹಾಕಾವ್ಯ, ಪಾರಂಪರಿಕ ಹೈನುಗಾರಿಕೆ, ಪಾರಂಪರಿಕ ತೋಟಗಾರಿಕೆ ಹಾಗೂ ಡಿಪ್ಲೊಮಾ ಕೋರ್ಸ್‌ಗಳಾದ ಜಾನಪದ ಬಯಲಾಟ (ಮೂಡಲಪಾಯ), ಯಕ್ಷಗಾನ ಬಯಲಾಟ, ಪಾರಂಪರಿಕ ಸೌಂದರ್ಯ ಶಾಸ್ತ್ರ, ಹಚ್ಚೆ, ಪಾರಂಪರಿಕ ಸಮರ ಕಲೆ, ಯೋಗ ಕೋರ್ಸಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಹತೆ, ಅರ್ಜಿ ನಮೂನೆ, ಪ್ರವೇಶ ಶುಲ್ಕ ಹಾಗೂ ಇತರ ಮಾಹಿತಿಗಳನ್ನು ವಿಶ್ವವಿದ್ಯಾಲಯದ ವಿವರಣಾ ಪುಸ್ತಕದಿಂದ ಪಡೆಯಬಹುದು ಅಥವಾ ವಿಶ್ವವಿದ್ಯಾಲಯದ ವೆಬ್‌ಸೈಟ್ http://www.janapadauniversity.ac.in ನ್ನು ಸಂಪರ್ಕಿಸಬಹುದಾಗಿದೆ. ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಮಲೆಮಹದೇಶ್ವರ ಬೆಟ್ಟ, ಬೀದರ್, ಮಂಡ್ಯ ಮತ್ತು ಜೋಯಿಡಾ ಗಳಲ್ಲಿರುವ ಪ್ರಾದೇಶಿಕ ಜನಪದ ಕಲೆಗಳ ಕಲಿಕಾ ಕೇಂದ್ರಗಳಲ್ಲಿ ಸ್ನಾತಕೋತ್ತರ ಡಿಪ್ಲೊಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶ ಬಯಸುವವರು ಸಂಬಂಧಿಸಿದ ಅಧ್ಯಯನ ಕೇಂದ್ರಗಳಿಂದಲೂ ಅರ್ಜಿ ಪಡೆದು ಭರ್ತಿ ಮಾಡಿ ದೃಢೀಕರಿಸಿದ ಪೂರಕ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ವಿಶ್ವವಿದ್ಯಾಲಯದ ಕಛೇರಿಗೆ ಭೇಟಿ ನೀಡಬಹುದು ಅಥವಾ ದೂರವಾಣಿ ಸಂಖ್ಯೆ: 6366266465, 9449233966, 9482810694 ಇಲ್ಲಿಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.